ಆ) ಹಾಗಿದ್ದಲ್ಲಿ, ಈ ಅಧಿಕಾರಿಯ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ವಿಳಂಬ ನೀತಿ ಅನುಸರಿಸಿ ಅವರಿಗೆ ಬಡ್ತಿ ನೀಡುವ ಹುನ್ನಾರ ನಡೆಸುತ್ತಿರುವುದು ನಿಜವೇ;

ಇ) ಹಾಗಿದ್ದಲ್ಲಿ, ದಿನಾಂಕ 21.07.2005ರ ರಾಜ್ಯ ಮಹಿಳಾ ಆಯೋಗವು ಮಾಡಿದ ಶಿಫಾರಸ್ಸು ಪತ್ರದ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಮತ್ತು ಅಲ್ಪಸಂಖ್ಯಾತ ಕಲ್ಯಾಣ ಸಚಿವರು): ಅ) ಶ್ರೀ ವಿ. ಮುನಿನಾರಾಯಣಪ್ಪ. ಹಿಂದಿನ ಸಹಾಯಕ ನಿರ್ದೇಶಕರು. ವಿಶಿಷ್ಟ ವೃತ್ತಿ ಮತ್ತು ಕಾರ್ಯನಿರ್ವಾಹಕ ಉದ್ಯೋಗ ವಿನಿಮಯ ಕೇಂದ್ರ. ಬೆಂಗಳೂರು ಇವರು ತಮ್ಮ ಕಛೇರಿಯ ಮಹಿಳಾ ಗ್ರೂಪ್ ಡಿ ಉದ್ಯೋಗಿಯೊಬ್ಬರಿಗೆ ಲೈಂಗಿಕ ಕಿರುಕುಳ ನೀಡಿದ್ದರೆಂಬ ಬಗ್ಗೆ ರಾಜ್ಯ ಮಹಿಳಾ ಆಯೋಗದಿಂದ ದೂರು ಬಂದಿರುತ್ತದೆ.

ಆ) ಇಲ್ಲ.

ಇ) ರಾಜ್ಯ ಮಹಿಳಾ ಆಯೋಗದ ದಿನಾಂಕ : 21–7–2005ರ ಸಲಹೆ ಮೇರೆಗೆ ದೂರು ನಿವಾರಣಾ ಸಮಿತಿಯನ್ನು ಪುನರ್ ರಚಿಸಿ, ಪ್ರಕರಣದ ಬಗ್ಗೆ ವಿಚಾರಣೆ ನಡೆಸಿ ವರದಿ ನೀಡುವಂತೆ ಸೂಚಿಸಲಾಗಿದೆ.

ವಿದ್ಯಾರ್ಥಿನಿಲಯದಲ್ಲಿ ಸೀಟುಗಳ ಸಂಖ್ಯೆಯನ್ನು ಹೆಚ್ಚಿಸುವುದು

325(1446) ಶ್ರೀ ರಾಮರೆಡ್ಡಿ (ಜಿ.ವಿ. ಬಾಗೇಪಲ್ಲಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಬಾಗೇಪಲ್ಲಿ ಪಟ್ಟಣದಲ್ಲಿರುವ ಹಿಂದುಳಿದ ವರ್ಗಗಳ ಹಾಗೂ ಅಲ್ಪಸಂಖ್ಯಾತರ ವರ್ಗಗಳ ಮೆಟ್ರಿಕ್ ನಂತರದ ಬಾಲಕ ವಿದ್ಯಾರ್ಥಿ ನಿಲಯದಲ್ಲಿ ವಿದ್ಯಾರ್ಥಿಗಳ ಸಂಖ್ಯೆಯನ್ನು ಹೆಚ್ಚಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ:

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಬಾಲಚಂದ್ರ ಲ. ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು) :

ಅ) **ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**

ಬಾಗೇಪಲ್ಲಿ ಟೌನ್‌ನಲ್ಲಿರುವ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯದಲ್ಲಿ ಮಂಜೂರಾತಿ ಸಂಖ್ಯೆ 50 (ಐವತ್ತು) ಇದ್ದು ಪ್ರವೇಶ ಕೋರಿ ಸಂಖ್ಯಾಬಲದ ಹೆಚ್ಚಳಕ್ಕೆ ಅಧಿಕ ಬೇಡಿಕೆ ಇದ್ದು, ಈ ಬಗ್ಗೆ ವಿದ್ಯಾರ್ಥಿಗಳಿಂದ ಸಾಕಷ್ಟು ಅರ್ಜಿಗಳು ಬರುತ್ತಿವೆ.

ಅಲ್ಪಸಂಖ್ಯಾತರ ಇಲಾಖೆ

ಅಲ್ಪಸಂಖ್ಯಾತರ ಇಲಾಖೆಯಿಂದ ಬಾಗೇಪಲ್ಲಿ ಪಟ್ಟಣದಲ್ಲಿ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ ಇರುವುದಿಲ್ಲ.

ಆ) **ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**

ಆಯವ್ಯಯದ ಲಭ್ಯತೆ, ನಿಲಯದಲ್ಲಿನ ಸ್ಥಳಾವಕಾಶ ಹಾಗೂ ಬೇಡಿಕೆಯನ್ನು ಗಮನದಲ್ಲಿಟ್ಟುಕೊಂಡು ಸಂಖ್ಯಾಬಲ ಹೆಚ್ಚಿಸಲು ಪರಿಶೀಲಿಸಲಾಗುವುದು.

ಅಲ್ಪಸಂಖ್ಯಾತರ ಇಲಾಖೆ

ಉದ್ಭವಿಸುವುದಿಲ್ಲ.

ಟ್ರಾಮ್ ಸೆಂಟರ್ ತೆರೆಯುವುದು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸುವುದು

327(1586) ಶ್ರೀ ಅಂಜನಾಮೂರ್ತಿ (ನೆಲಮಂಗಲ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ನೆಲಮಂಗಲ ಮತ ಕ್ಷೇತ್ರಕ್ಕೆ ಸೇರಿದ ಮಾಗಡಿ ತಾಲ್ಲೂಕು ಸೋಲೂರು ಹೋಬಳಿ, ಸೋಲೂರು ಗ್ರಾಮದಲ್ಲಿರುವ (ರಾಷ್ಟ್ರೀಯ ಹೆದ್ದಾರಿ 48) ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಆ) ರಾಷ್ಟ್ರೀಯ ಹೆದ್ದಾರಿ 48 ಮತ್ತು ರಾಷ್ಟ್ರೀಯ ಹೆದ್ದಾರಿ 4 ರಲ್ಲಿ ಅಪಘಾತಗಳು ಸಂಭವಿಸುತ್ತಿರುವುದರಿಂದ ನೆಲಮಂಗಲ ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ಅಪಘಾತಕ್ಕೊಳಗಾಗುವವರ ನಾವು ನೋವುಗಳನ್ನು ತಡೆಯಲು ಟ್ರಾಮಾ ಸೆಂಟರ್ ಒಂದನ್ನು ತೆರೆಯುವ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಶ್ರೀ ಆರ್. ಅಶೋಕ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಸರ್ಕಾರವು ಮಾರ್ಗಸೂಚಿ ಪ್ರಕಾರ ಹಾಗೂ ಅನುದಾನದ ಲಭ್ಯತೆ ಆಧರಿಸಿ ಪರಿಶೀಲಿಸಿ ಕ್ರಮ ಕೈಗೊಳ್ಳುವುದು.

ಆ)ಮತ್ತು ಇ) ಈಗಾಗಲೇ ಕೆ.ಹೆಚ್.ಎನ್.ಡಿ.ಪಿ ಯೋಜನೆ ಅಡಿಯಲ್ಲಿ ಈ ಆಸ್ಪತ್ರೆಯಲ್ಲಿ ಟ್ರಾಮ್ ಸೆಂಟರ್‌ನ್ನು ತೆರೆಯಲಾಗಿದೆ.

ಪಶು ಸಂಗೋಪನಾ ಆಸ್ಪತ್ರೆಗಳು

328(1098) ಶ್ರೀ ಅಕ್ಕಮಲ್ಲಿಕಾರ್ಜುನ ಸಹದೇವಪ್ಪ (ಕುಂದಗೊಳ) : ಮಾನ್ಯ ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?